# ಕರ್ನಾಟಕ ಲೋಕಸೇವಾ ಆಯೋಗ, " ಉದ್ಯೋಗ ಸೌಧ ",ಬೆಂಗಳೂರು -560001

**ಸಂಖ್ಯೆ: ಪಿಎಸ್ ಸಿ 1 ಆರ್ ಟಿಬಿ-4/2020** **ದಿನಾಂಕ: 30-07-2020**

## ಅಧಿಸೂಚನೆ

1. ಆಯೋಗವು ಕರ್ನಾಟಕ ನಾಗರೀಕ ಸೇವೆಗಳು (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಹಾಗೂ ಆಯ್ಕೆ) (ಸಾಮಾನ್ಯ) ನಿಯಮಗಳು 2006 ಮತ್ತು ತಿದ್ದುಪಡಿ ನಿಯಮಗಳನ್ವಯ ಲೋಕೋಪಯೋಗಿ ಇಲಾಖೆಯಲ್ಲಿನ ಗ್ರೂಪ್ "ಬಿ" / ಗ್ರೂಪ್ " ಸಿ " ತಾಂತ್ರಿಕ ವೃಂದದ ಕೆಳಕಂಡ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ Online ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

| ಕ್ರಮ ಸಂಖ್ಯೆ | ಇಲಾಖೆಯ ಹೆಸರು /ಹುದ್ದೆಯ ಪದನಾಮ | ಉಳಿಕೆ ಮೂಲ ವೃಂದ | ಹೈಕ ವೃಂದ | ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|
| | **ಗ್ರೂಪ್ "ಬಿ" ಹುದ್ದೆಗಳು** | | | |
| 1 | ಲೋಕೋಪಯೋಗಿ ಇಲಾಖೆಯಲ್ಲಿನ ಸಹಾಯಕ ಇಂಜಿನಿಯರ್ (ಗ್ರೇಡ್-1) (ಸಿವಿಲ್) | 600 | 60 | 660 |
| | **ಗ್ರೂಪ್ "ಸಿ" ಹುದ್ದೆಗಳು** | | | |
| 2 | ಲೋಕೋಪಯೋಗಿ ಇಲಾಖೆಯಲ್ಲಿನ ಕಿರಿಯ ಇಂಜಿನಿಯರ್(ಸಿವಿಲ್) | 325 | 05 | 330 |
| | ಒಟ್ಟು | 925 | 65 | 990 |

2) **ಅರ್ಜಿ / ಶುಲ್ಕ ಸ್ವೀಕೃತಿ ಕಾಲಮಿತಿ :**

| | |
|---|---|
| ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ | 17-08-2020 |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 16-09-2020 |
| ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ | 18-09-2020 |

**ಟಿಪ್ಪಣಿ:-** ನೇಮಕಾತಿ ಪ್ರಾಧಿಕಾರಗಳು ದೃಢೀಕರಿಸಿ ನೀಡಿರುವ ಮೇಲ್ಕಂಡ ಹುದ್ದೆಗಳ ವರ್ಗೀಕರಣದ ವಿವರಗಳನ್ನು ಅನುಸೂಚಿಯಲ್ಲಿ ತೋರಿಸಲಾಗಿದೆ. ಈ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂದರ್ಭದಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ.

**ವಿಶೇಷ ಸೂಚನೆ:- ಅಭ್ಯರ್ಥಿಗಳು ಅರ್ಜಿಯಲ್ಲಿ ಕೋರಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಅಧಿಸೂಚನೆಯ ಅನುಬಂಧದಲ್ಲಿ ಸೂಚಿಸಿರುವ ನಮೂನೆಗಳಲ್ಲಿಯೇ ಕಡ್ಡಾಯವಾಗಿ ಪಡೆದಿಟ್ಟುಕೊಂಡಿರತಕ್ಕದ್ದು.**

**ಸೂಚನೆ:-** ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಚಿಸಿದಲ್ಲಿ, ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಿ ಒಂದೇ ಶುಲ್ಕವನ್ನು ಪಾವತಿಸತಕ್ಕದ್ದು.

3) ಅರ್ಜಿಗಳನ್ನು Online ಮೂಲಕವೇ ಭರ್ತಿ ಮಾಡಿ , ಭಾವಚಿತ್ರ/ಸಹಿ /ವಯೋಮಿತಿ/ ವಿದ್ಯಾರ್ಹತೆ ಹಾಗೂ ಕೋರಿದ ಮೀಸಲಾತಿಗೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಅಪ್ಲೋಡ್ ಮಾಡಿದ ನಂತರ ಶುಲ್ಕವನ್ನು ಯಾವುದೇ ಕಾಮನ್ ಸರ್ವೀಸ್ ಸೆಂಟರ್ ಗಳಲ್ಲಿ (CSC) ಅಥವಾ ನೆಟ್ ಬ್ಯಾಂಕಿಂಗ್ / ಡೆಬಿಟ್ ಕಾರ್ಡ್/ ಕ್ರೆಡಿಟ್ ಕಾರ್ಡ್ ಮೂಲಕ ಸಂದಾಯ ಮಾಡಬಹುದಾಗಿರುತ್ತದೆ. ಶುಲ್ಕವನ್ನು ಪಾವತಿಸದೇ ಹಾಗೂ ದಾಖಲೆಗಳನ್ನು/ ಭಾವಚಿತ್ರ/ ಸಹಿಯನ್ನು ಅಪ್ಲೋಡ್ ಮಾಡದೇ ಇರುವ / ಅಸ್ಪಷ್ಟ ದಾಖಲೆಗಳನ್ನು ಅಪ್ಲೋಡ್ ಮಾಡಿರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಶುಲ್ಕವನ್ನು ಕಾಮನ್ ಸರ್ವೀಸ್ ಸೆಂಟರ್ ಗಳಲ್ಲಿ (CSC) ಪಾವತಿಸಲು ಅವಕಾಶ ನೀಡಲಾಗಿರುವುದರಿಂದ ಅರ್ಜಿಗಳನ್ನು ಇಲ್ಲಿಯೂ ಸಹ ಸಲ್ಲಿಸಬಹುದಾಗಿದೆ.

3.1) ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವ ಮೊದಲು ಅಧಿಸೂಚನೆ, ಅನುಬಂಧ-1 ರಲ್ಲಿ ನೀಡಿರುವ ಅರ್ಜಿ ಭರ್ತಿ ಮಾಡುವ ಕುರಿತ ಸೂಚನೆಗಳು, ಅರ್ಹತಾ ಷರತ್ತುಗಳನ್ನು ಓದಿಕೊಳ್ಳತಕ್ಕದ್ದು. ನೇಮಕಾತಿ ಪ್ರಾಧಿಕಾರವು ದೃಢೀಕರಿಸಿ ನೀಡಿರುವ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:-

| | | | |
|---|---|---|---|
| ಸಾ.ಅ | ಸಾಮಾನ್ಯ ಅರ್ಹತೆ | GM | General Merit |
| ಪ.ಜಾ | ಪರಿಶಿಷ್ಟ ಜಾತಿ | SC | Scheduled Caste |
| ಪ.ಪಂ | ಪರಿಶಿಷ್ಟ ಪಂಗಡ | ST | Scheduled Tribe |
| ಪ್ರ.-1 | ಪ್ರವರ್ಗ-1 | Cat–1 | Category – I |
| 2ಎ | ಪ್ರವರ್ಗ-2ಎ | 2A | Category – 2A |
| 2ಬಿ | ಪ್ರವರ್ಗ-2ಬಿ | 2B | Category – 2B |
| 3ಎ | ಪ್ರವರ್ಗ-3ಎ | 3A | Category – 3A |
| 3ಬಿ | ಪ್ರವರ್ಗ-3ಬಿ | 3B | Category – 3B |

| | | | |
|---|---|---|---|
| ಮಾ.ಸೈ | ಮಾಜಿ ಸೈನಿಕ | Ex-MP | Ex-Military Person |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| ಕ.ಮಾ.ಅ | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Student |
| ಅಂ.ವಿ. | ಅಂಗವಿಕಲ ಅಭ್ಯರ್ಥಿ | PH | Physically Handicapped |
| ಯೋ.ನಿ.ಅ | ಯೋಜನೆ ನಿರಾಶ್ರಿತ ಅಭ್ಯರ್ಥಿ | PDP | Project Displaced Person |
| ಉ.ಮೂ.ವೃ | ಉಳಿಕೆ ಮೂಲ ವೃಂದ | RPC | Residual Parent Cadre |
| ಹೈಕ | ಹೈದ್ರಾಬಾದ್ – ಕರ್ನಾಟಕ | HK | Hyderabad - Karnataka |

## 4. ಶುಲ್ಕ:-

| | |
|---|---|
| ಸಾಮಾನ್ಯ ಅರ್ಹತೆ ಅಭ್ಯರ್ಥಿಗಳಿಗೆ | ರೂ.600/- |
| ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ | ರೂ.300/- |
| ಮಾಜಿ ಸೈನಿಕ ಅಭ್ಯರ್ಥಿಗಳಿಗೆ | ರೂ. 50/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ,ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ | ಶುಲ್ಕ ಪಾವತಿಯಿಂದ ವಿನಾಯಿತಿ ಇದೆ. |

**ಸೂಚನೆ:-** ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿದಲ್ಲಿ, ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಿ ಒಂದೇ ಶುಲ್ಕವನ್ನು ಪಾವತಿಸತಕ್ಕದ್ದು.

**ವಿಶೇಷ ಸೂಚನೆ:- ರೂ. 35/- ರ ಪ್ರಕ್ರಿಯೆ ಶುಲ್ಕ (processing fees)ವನ್ನು ಎಲ್ಲಾ ಅಭ್ಯರ್ಥಿಗಳು (ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಮಾಜಿ ಸೈನಿಕ ಹಾಗೂ ಅಂಗವಿಕಲ ಅಭ್ಯರ್ಥಿಗಳು ಸೇರಿದಂತೆ) ಕಡ್ಡಾಯವಾಗಿ ಪಾವತಿಸತಕ್ಕದ್ದು.**

4.1 ಅಭ್ಯರ್ಥಿಗಳು ನಿಗದಿಪಡಿಸಿದ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂತಿರುಗಿಸಲಾಗುವುದಿಲ್ಲ ಅಥವಾ ಅದನ್ನು ಆಯೋಗವು ನಡೆಸುವ ಇತರೆ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಶುಲ್ಕವನ್ನುಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

4.2 ಸರ್ಕಾರದ ಆದೇಶ ಸಂಖ್ಯೆ ಲೋಇ 166 ಸೇಸಕಿ 2018 ದಿನಾಂಕ 08-11-2019 ರ ತಿದ್ದುಪಡಿ ದಿನಾಂಕ: 03-12-2019 ರಂತೆ ಈ ಹಿಂದೆ ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು(ದಕ್ಷಿಣ), ಲೋಕೋಪಯೋಗಿ ಇಲಾಖೆ, ಬೆಂಗಳೂರು, ಇವರ ಅಧಿಸೂಚನೆ ಸಂಖ್ಯೆ ಸಿಬಿಎಸ್ 187 ಸಇಂ:ಕಿಇಂ:ನೇರ ನೇಮಕಾತಿ:ಇಎಸ್ ಸಿ 2018-19 ದಿ: 7-3-2019 ರನ್ವಯ ಅರ್ಜಿ ಸಲ್ಲಿಸಿ ಶುಲ್ಕ ಪಾವತಿಸಿರುವ ಅಭ್ಯರ್ಥಿಗಳಿಗೆ ಪ್ರಸ್ತುತ ಆಯೋಗವು ಹೊರಡಿಸಿರುವ ಸದರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಪರೀಕ್ಷಾ ಶುಲ್ಕದಿಂದ ವಿನಾಯಿತಿ ನೀಡಲಾಗುವುದು. ಆದರೆ Processing Fee ರೂ:35/- ಅನ್ನು ಪಾವತಿಸಬೇಕಾಗುತ್ತದೆ. ಈ ಸಂಬಂಧ ಅಭ್ಯರ್ಥಿಗಳು ಆನ್ ಲೈನ್ ಅರ್ಜಿಯಲ್ಲಿ ಈ ಹಿಂದಿನ ಅಧಿಸೂಚನೆಗೆ ಅರ್ಜಿ ಸಲ್ಲಿಸಿದ್ದ ವಿವರಗಳನ್ನು ನಮೂದಿಸತಕ್ಕದ್ದು.

## 5. ಅರ್ಹತಾ ಷರತ್ತುಗಳು:-

| | |
|---|---|
| ಅ) | ಭಾರತೀಯ ನಾಗರೀಕನಾಗಿರತಕ್ಕದ್ದು. |
| ಆ) | ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿಯಿರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ. |
| ಇ) | ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ |

| | |
|---|---|
| | ಮುಕ್ತರಾಗಿರಬೇಕು. |
| ಈ) | ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ. |

ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

## 6. ನೇಮಕಾತಿ ವಿಧಾನ –

### 6.1. ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ:-

ಕಾಲಕಾಲಕ್ಕೆ ತಿದ್ದುಪಡಿಯಾದ ಕರ್ನಾಟಕ ನಾಗರೀಕ ಸೇವೆಗಳು (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಮತ್ತು ಆಯ್ಕೆ) (ಸಾಮಾನ್ಯ) ನಿಯಮಗಳು 2006 ಮತ್ತು ತಿದ್ದುಪಡಿ ನಿಯಮಗಳಲ್ಲಿ ನಿರ್ದಿಷ್ಟಪಡಿಸಲಾದಂತೆ, ಅಧಿಸೂಚಿಸಲಾಗಿರುವ ಯಾವುದೇ ತಾಂತ್ರಿಕ ಹುದ್ದೆಗಳ ಸಂದರ್ಶನಕ್ಕೆ/ಆಯ್ಕೆಗೆ ಅರ್ಹರಾಗಲು ಅಭ್ಯರ್ಥಿಗಳು ಆಯೋಗವು ನಡೆಸುವ ಎಸ್.ಎಸ್.ಎಲ್.ಸಿ. ಮಟ್ಟದ ಕಡ್ಡಾಯ ಕನ್ನಡ ಭಾಷೆಯ 150 ಅಂಕಗಳ ಪರೀಕ್ಷೆಯಲ್ಲಿ ಕನಿಷ್ಠ 50 ಅಂಕಗಳೊಂದಿಗೆ ಕಡ್ಡಾಯವಾಗಿ ತೇರ್ಗಡೆ ಹೊಂದಲೇಬೇಕು. ನಿಗದಿಪಡಿಸಿದ ಕನಿಷ್ಠ 50 ಅಂಕಗಳನ್ನು ಪಡೆಯದ ಅಭ್ಯರ್ಥಿಗಳು ಸಂದರ್ಶನಕ್ಕೆ / ಆಯ್ಕೆಗೆ ಅರ್ಹರಾಗುವುದಿಲ್ಲ (ತಿದ್ದುಪಡಿ ದಿನಾಂಕ: 07-06-2007) ಹಾಗೂ ಈ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಆಯ್ಕೆಗೆ ಪರಿಗಣಿಸುವುದಿಲ್ಲ.

ಆದರೆ :

``ಎಸ್.ಎಸ್.ಎಲ್.ಸಿ. ಅಥವಾ ಇದಕ್ಕೆ ತತ್ಸಮಾನವೆಂದು ರಾಜ್ಯ ಸರ್ಕಾರದಿಂದ ಘೋಷಿಸಲ್ಪಟ್ಟ ಇತರೆ ಯಾವುದೇ ಪರೀಕ್ಷೆಯಲ್ಲಿ ಅಥವಾ ಎಸ್.ಎಸ್.ಎಲ್.ಸಿ. ಪರೀಕ್ಷೆಗಿಂತ ಮೇಲ್ಮಟ್ಟದ ಯಾವುದೇ ಪರೀಕ್ಷೆಯಲ್ಲಿ ಕನ್ನಡವನ್ನು ಮುಖ್ಯ ಭಾಷೆಯಾಗಿ, ಅಥವಾ ದ್ವಿತೀಯ ಭಾಷೆಯಾಗಿ ಅಥವಾ ಐಚ್ಛಿಕ ವಿಷಯವಾಗಿ (ಆದರೆ ಸಂಯುಕ್ತ ಪತ್ರಿಕೆಯ ವಿಷಯಗಳಲ್ಲೊಂದಾಗಿರಬಾರದು) ಅಥವಾ ಮೇಲಿನ ಪರೀಕ್ಷೆಗಳಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ ತೇರ್ಗಡೆಯಾಗಿರುವ ಅಥವಾ ಕರ್ನಾಟಕ ಲೋಕಸೇವಾ ಆಯೋಗದಿಂದ ಈ ಹಿಂದೆ ನಡೆಸಲ್ಪಟ್ಟ ಕಡ್ಡಾಯ ಕನ್ನಡ ಭಾಷೆ ಪರೀಕ್ಷೆಯಲ್ಲಿ ತೇರ್ಗಡೆಯಾಗಿರುವ ಅಭ್ಯರ್ಥಿಗಳು, ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗುವುದರಿಂದ ವಿನಾಯಿತಿ ಹೊಂದಿರುತ್ತಾರೆ(ತಿದ್ದುಪಡಿ ದಿನಾಂಕ: 17-04-2008, 13-12-2015 ಮತ್ತು ಸರ್ಕಾರದ ಪತ್ರ ದಿನಾಂಕ 17-04-2018)

ವಿಶೇಷ ಸೂಚನೆ:- ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಕನ್ನಡ ಭಾಷೆಯನ್ನು ತೃತೀಯ ಭಾಷೆಯನ್ನಾಗಿ ಅಭ್ಯಸಿಸಿದ್ದಲ್ಲಿ ಅಥವಾ ಇತರೆ ಸಂಸ್ಥೆಗಳು ನಡೆಸುವ ಕನ್ನಡ ಭಾಷಾ ಪರೀಕ್ಷೆಗಳಲ್ಲಿ / ಇಲಾಖಾ ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಿದಂತಹ ಅಭ್ಯರ್ಥಿಗಳಿಗೆ ಈ ಮೇಲಿನ ವಿನಾಯಿತಿ ಪಡೆಯಲು ಅವಕಾಶ ಇರುವುದಿಲ್ಲ. ಇವರು ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯನ್ನು ತೆಗೆದುಕೊಳ್ಳಲೇಬೇಕಿರುತ್ತದೆ.

ಆಯೋಗವು ಈ ಹಿಂದೆ ನಡೆಸಿದ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ ಅಭ್ಯರ್ಥಿಗಳು ಪ್ರಸ್ತುತ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಿಂದ ವಿನಾಯಿತಿ ಪಡೆಯಲು ಅರ್ಜಿಯಲ್ಲಿನ ನಿಗದಿತ ಸ್ಥಳದಲ್ಲಿ ವಿವರಗಳನ್ನು ನಮೂದಿಸಕ್ಕದ್ದು. ಸರಿಯಾದ ಮಾಹಿತಿ ಒದಗಿಸದಿದ್ದಲ್ಲಿ ಮೇಲಿನ ವಿನಾಯಿತಿಯನ್ನು ಪಡೆಯಲು ಅರ್ಹತೆ ನೀಡುವುದಿಲ್ಲ. ಹಾಗೂ ವಿನಾಯಿತಿ ಪಡೆಯಲು ತಪ್ಪಾಗಿ ಮಾಹಿತಿ ನೀಡಿದ ಅಭ್ಯರ್ಥಿಗಳಿಗೆ ಸಂದರ್ಶನ /ಮೂಲ ದಾಖಲಾತಿ ಪರಿಶೀಲನೆಯ ಮುನ್ನವೇ ಅನರ್ಹಗೊಳಿಸಲಾಗುವುದು. ಅಲ್ಲದೆ, ಅರ್ಜಿಯಲ್ಲಿ ಈ ಮಾಹಿತಿಯನ್ನು / ಇನ್ನಾವುದೇ ಮಾಹಿತಿಯನ್ನು ತಪ್ಪಾಗಿ ನೀಡಿದ್ದಲ್ಲಿ ನಂತರ ಅದನ್ನು ಸರಿಪಡಿಸಿಕೊಳ್ಳಲು ಅವಕಾಶ ನೀಡಲಾಗುವುದಿಲ್ಲ. ಆದುದರಿಂದ, ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವಾಗ ಎಲ್ಲಾ ವಿಷಯಗಳನ್ನು ಪರಿಶೀಲಿಸಿ, ಸರಿಯಾಗಿರುವ ಬಗ್ಗೆ ಖಚಿತಪಡಿಸಿಕೊಂಡ ನಂತರವೇ ಒಪ್ಪಿಗೆಯನ್ನು ನೀಡಬೇಕೆಂದು ಸೂಚಿಸಿದೆ.

6.2 ಕರ್ನಾಟಕ ನಾಗರೀಕ ಸೇವೆಗಳು (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಹಾಗೂ ಆಯ್ಕೆ) (ಸಾಮಾನ್ಯ) ನಿಯಮಗಳು 2006 ಮತ್ತು ತಿದ್ದುಪಡಿ ನಿಯಮಗಳಂತೆ ಗ್ರೂಪ್-ಎ ಮತ್ತು ಬಿ ವೃಂದದ ಹುದ್ದೆಗಳ ನೇಮಕಾತಿಯನ್ನು ಸ್ಪರ್ಧಾತ್ಮಕ ಪರೀಕ್ಷೆ ಹಾಗೂ ಸಂದರ್ಶನದ ಮೂಲಕ ಮಾಡಲಾಗುವುದು.

ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಅರ್ಹರಾದ ನಂತರ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಒಟ್ಟು ಅಂಕಗಳ ಶೇಕಡವಾರು ಮತ್ತು ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳ ಆಧಾರದ ಮೇಲೆ 1:3 ಅನುಪಾತದಲ್ಲಿ ಸಂದರ್ಶನಕ್ಕೆ ಆಹ್ವಾನಿಸಲಾಗುವುದು. ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಗೆ / ಸಂದರ್ಶನಕ್ಕೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕು.

6.3. **ಸಂದರ್ಶನಕ್ಕೆ ನಿಗದಿಪಡಿಸಿದ ಗರಿಷ್ಠ ಅಂಕಗಳು:-** ಸ್ಪರ್ಧಾತ್ಮಕ ಪರೀಕ್ಷೆಗೆ ನಿಗದಿಪಡಿಸಿದ ಒಟ್ಟು ಅಂಕಗಳ ಶೇಕಡ 12.5ರಷ್ಟು ಸಂದರ್ಶನಕ್ಕೆ ನಿಗದಿಪಡಿಸಿದ ಗರಿಷ್ಠ ಅಂಕಗಳಾಗಿರುತ್ತವೆ. ಸಂದರ್ಶನ ನಡೆಸುವ ಉದ್ದೇಶ ಎಂದರೆ ಅಭ್ಯರ್ಥಿಗಳು ಆಯ್ಕೆ ಬಯಸಿದ ಹುದ್ದೆಗೆ ಅವರ ಅರ್ಹತೆ, ವ್ಯಕ್ತಿತ್ವ, ಸಂಬಂಧಿತ ವಿಷಯದಲ್ಲಿ ವ್ಯಕ್ತಪಡಿಸುವ ಸಾಮರ್ಥ್ಯತೆ, ಸೂಕ್ಷ್ಮತೆ ಮತ್ತು ಕರ್ತೃತ್ವ ಶಕ್ತಿ, ಸಾಮಾನ್ಯ ಜ್ಞಾನ ಹಾಗೂ ವಿಷಯದಲ್ಲಿನ ಪರಿಜ್ಞಾನ ಹಾಗೂ ಇನ್ನಿತರ ವಿಶೇಷ ಗುಣಗಳನ್ನು ನಿರ್ಧರಿಸುವುದಾಗಿರುತ್ತದೆ.

ಅಂತಿಮವಾಗಿ ಆಯೋಗವು ನಿಯಮಾನುಸಾರ ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಒಟ್ಟು ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸಿದ ಅಂಕಗಳ ಶೇಕಡವಾರು ಜೇಷ್ಠತೆಯನ್ನು ಆಧರಿಸಿ ಹಾಗೂ ಚಾಲ್ತಿಯಲ್ಲಿರುವ ನಿಯಮಗಳನುಸಾರ ಹುದ್ದೆಗಳ ನೇಮಕಾತಿಗಾಗಿ ಇರುವ ಮೀಸಲಾತಿಯನ್ವಯ ಪ್ರಕಟಿಸಲಾದ ಖಾಲಿ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ ಅಭ್ಯರ್ಥಿಗಳನ್ನು ಆಯ್ಕೆ ಮಾಡುತ್ತದೆ.

**ಗ್ರೂಪ್-ಸಿ ಹುದ್ದೆಗಳಿಗೆ** ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿರುವ ಒಟ್ಟು ಶೇಕಡವಾರು ಅಂಕಗಳ ಮೇರೆಗೆ ಹಾಗೂ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನ್ವಯ ಆಯ್ಕೆ ಮಾಡಲಾಗುವುದು.

## 6.4 ಸ್ಪರ್ಧಾತ್ಮಕ ಪರೀಕ್ಷಾ ವಿಧಾನ:

ಸ್ಪರ್ಧಾತ್ಮಕ ಪರೀಕ್ಷೆಯು ವಸ್ತು ನಿಷ್ಠ ಬಹು ಆಯ್ಕೆ ಮಾದರಿಯಲ್ಲಿದ್ದು ಋಣಾತ್ಮಕ ಮೌಲ್ಯಮಾಪನವಿರುತ್ತದೆ. ಪ್ರತಿ ತಪ್ಪು ಉತ್ತರಕ್ಕೆ ಪ್ರಶ್ನೆಗೆ ನಿಗದಿಪಡಿಸಿದ ಅಂಕಗಳ 0.25 (1/4th) ರಷ್ಟು ಅಂಕಗಳನ್ನು ಕಳೆಯಲಾಗುವುದು. Competitive examination will be of Objective Multiple Choice type and there will be negative valuation. For every each question of which a wrong answer has been given by the candidate, 0.25 (1/4th ) of the marks assigned for the question will be deducted.

| ಪತ್ರಿಕೆ / Paper | ವಿಷಯ | ಅಂಕಗಳು / Marks | ಅವಧಿ / Duration ಗಂಟೆ / Hours |
|---|---|---|---|
| 1 | ಸಾಮಾನ್ಯ ಪತ್ರಿಕೆ General Paper | 200 | 1½ ಗಂಟೆ |
| 2 | ನಿರ್ದಿಷ್ಟ ಪತ್ರಿಕೆ Specific Paper | 200 | 2 ಗಂಟೆ |

**ವಿಶೇಷ ಸೂಚನೆ:-**

1) ಸಹಾಯಕ ಇಂಜಿನಿಯರ್ (ಸಿವಿಲ್) ಹುದ್ದೆಗಳಿಗೆ ಸಾಮಾನ್ಯ ಪತ್ರಿಕೆಯು ಪದವಿ ಮಟ್ಟದಾಗಿದ್ದು, ಕಿರಿಯ ಇಂಜಿನಿಯರ್ (ಸಿವಿಲ್) ಹುದ್ದೆಗಳಿಗೆ ಪದವಿಗಿಂತ ಕೆಳಮಟ್ಟದ್ದಾಗಿರುತ್ತದೆ.

2) ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗೆ ಅವರ ಪ್ರವೇಶ ಪತ್ರ ಹಾಗೂ ಅವರ ಭಾವಚಿತ್ರವಿರುವ ಮೂಲ ಗುರುತಿನ ಚೀಟಿ (ಚುನಾವಣಾ ಐಡಿ/ ಆಧಾರ್ ಕಾರ್ಡ್ / ಡ್ರೈವಿಂಗ್ ಲೈಸನ್ಸ್/ಪಾನ್ ಕಾರ್ಡ್/ಪಾಸ್ ಪೋರ್ಟ್ / ಸರ್ಕಾರಿ ನೌಕರರ ಐಡಿ) ಯನ್ನು ಪರೀಕ್ಷಾ ಕೇಂದ್ರದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಪರೀಕ್ಷಾ ಕೇಂದ್ರಕ್ಕೆ ಪ್ರವೇಶವನ್ನು ನೀಡಲಾಗುವುದಿಲ್ಲ ಹಾಗೂ ಡೌನ್‌ಲೋಡ್ ಮಾಡಿರುವ ಗುರುತಿನ ಚೀಟಿಗಳು / ಇತರೆ ಯಾವುದೇ ಗುರುತಿನ ಚೀಟಿಗಳು/ ಕಲರ್ ಜೆರಾಕ್ಸ್ ಪ್ರತಿಗಳನ್ನು ಪರಿಗಣಿಸಲಾಗುವುದಿಲ್ಲ.

ಸದರಿ ಹುದ್ದೆಗಳ ನೇಮಕಾತಿಗಳ ಸ್ಪರ್ಧಾತ್ಮಕ ಪರೀಕ್ಷೆಯನ್ನು ಆಫ್ ಲೈನ್-ಓಎಂಆರ್ ಮಾದರಿ (Offline-OMR type) ಅಥವಾ ಗಣಕ ಯಂತ್ರದ ಮೂಲಕ ಸ್ಪರ್ಧಾತ್ಮಕ ಪರೀಕ್ಷೆ (Computer based recruitment test-CBRT) ಮುಖಾಂತರ ನಡೆಸಲಾಗುವುದು. ಈ ವಿಷಯದಲ್ಲಿ ಆಯೋಗದ ತೀರ್ಮಾನವೇ ಅಂತಿಮವಾಗಿರುತ್ತದೆ. ಗಣಕ ಯಂತ್ರದ ಮೂಲಕ ಸ್ಪರ್ಧಾತ್ಮಕ (Computer based recruitment test-CBRT)ಪರೀಕ್ಷೆಯನ್ನು ನಡೆಸಲು ತೀರ್ಮಾನಿಸಿದಲ್ಲಿ ಅಭ್ಯರ್ಥಿಗಳಿಗೆ ಈ ಸಂಬಂಧ ಸೂಚನೆಗಳನ್ನು ಹಾಗೂ ಅಣಕು ಪರೀಕ್ಷೆಯನ್ನು (Mock Test) ತೆಗೆದುಕೊಳ್ಳುವ ಬಗ್ಗೆ ಮಾಹಿತಿಯನ್ನು ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.

## 6.5 . ಸ್ಪರ್ಧಾತ್ಮಕ ಪರೀಕ್ಷಾ ಕೇಂದ್ರ:-

| |
|---|
| ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ / ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಆಯೋಗವು ನಿಗದಿಪಡಿಸುವ ಯಾವುದೇ ಕೇಂದ್ರ ಸ್ಥಳದಲ್ಲಿ ನಡೆಸಲಾಗುವುದು ಹಾಗೂ ಸ್ಪರ್ಧಾತ್ಮಕ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳು ಕನ್ನಡ ಮತ್ತು ಆಂಗ್ಲ ಭಾಷೆಗಳೆರಡರಲ್ಲೂ ಇರುತ್ತವೆ. ಕನ್ನಡ ಭಾಷೆಯಲ್ಲಿರುವ ಪ್ರಶ್ನೆಗಳ ಭಾಷಾಂತರದಲ್ಲಿ ಏನಾದರೂ ಅಸ್ಪಷ್ಟತೆ ಇದ್ದಲ್ಲಿ ಅಭ್ಯರ್ಥಿಗಳು ಆಂಗ್ಲ ಭಾಷೆಯಲ್ಲಿರುವ ಪ್ರಶ್ನೆಗಳನ್ನು ನೋಡುವುದು ಹಾಗೂ ಇದೇ ಅಂತಿಮವಾಗಿರುತ್ತದೆ. |

ಸದರಿ ಹುದ್ದೆಗಳಿಗೆ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ / ಸ್ಪರ್ಧಾತ್ಮಕ ಪರೀಕ್ಷೆಗಳ ವೇಳಾಪಟ್ಟಿಯನ್ನು ನಂತರದಲ್ಲಿ ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.

ಅಭ್ಯರ್ಥಿಗಳು ಪರೀಕ್ಷೆಯ ಪ್ರವೇಶ ಪತ್ರಗಳನ್ನು ಆಯೋಗದ ವೆಬ್ ಸೈಟ್ ನಿಂದ ಡೌನ್ ಲೋಡ್ ಮಾಡಿಕೊಳ್ಳಲು ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಲಾಗುವುದು ಹಾಗೂ ಈ ಬಗ್ಗೆ ಮಾಹಿತಿಯನ್ನು ಆಯೋಗದ ವೆಬ್ ಸೈಟ್ ನಲ್ಲಿಯೂ ಬಿತ್ತರಿಸಲಾಗುವುದು. ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶ ಪತ್ರಗಳನ್ನು ಡೌನ್ ಲೋಡ್ ಮಾಡಿಕೊಂಡು ಪರೀಕ್ಷೆಗೆ ಹಾಜರಾತಕ್ಕದ್ದು.

| |
|---|
| **ಟಿಪ್ಪಣಿ:-** ಪ್ರಶ್ನೆ ಪತ್ರಿಕೆ ಬಗ್ಗೆ ಯಾವುದೇ ಬಗೆಯ ಆಕ್ಷೇಪಣೆ ಇದ್ದಲ್ಲಿ, ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲೇ ಪರೀಕ್ಷಾ ದಿನವೇ ಸಂಬಂಧಿತ ಮೇಲ್ವಿಚಾರಕರ ಮುಖಾಂತರ ಲಿಖಿತ ಮನವಿಯನ್ನು ಆಯೋಗಕ್ಕೆ ಸಲ್ಲಿಸಿ ಸ್ವೀಕೃತಿ (Acknowledgement) ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ. |

## 7. ಮೂಲ ದಾಖಲೆಗಳ ಪರಿಶೀಲನೆ / ಸಂದರ್ಶನ:-

ಆಯಾ ಹುದ್ದೆಗಳಿಗೆ ಮೂಲ ದಾಖಲೆಗಳ ಪರಿಶೀಲನೆ / ಸಂದರ್ಶನ ದಿನಾಂಕ ನಿಗದಿಪಡಿಸಿದಾಗ ಅರ್ಹತಾ ಪಟ್ಟಿಯನ್ನು ಆಯೋಗದ ಅಂತರ್ಜಾಲದಲ್ಲಿ ಬಿತ್ತರಿಸಲಾಗುವುದು. ಕರ್ನಾಟಕ ನಾಗರೀಕ ಸೇವೆಗಳು (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇರ ನೇಮಕಾತಿ ಮತ್ತು ಆಯ್ಕೆ) (ಸಾಮಾನ್ಯ) ನಿಯಮಗಳು 2006ರ ನಿಯಮ-7 ಕ್ಕೆ ಮಾಡಲಾದ ತಿದ್ದುಪಡಿ ದಿನಾಂಕ 20-05-2020 ರಂತೆ ಆಯೋಗವು ಅಭ್ಯರ್ಥಿಗಳಿಂದ ಸ್ವೀಕೃತವಾದ ಅರ್ಜಿಗಳು ಮತ್ತು ಅದರೊಂದಿಗಿನ ಲಗತ್ತುಗಳನ್ನು ಪರಿಶೀಲಿಸತಕ್ಕದ್ದು ಹಾಗೂ ಅಗತ್ಯವಿದ್ದಲ್ಲಿ ಮಾತ್ರ ಅಭ್ಯರ್ಥಿಗಳನ್ನು ಸಂದರ್ಶನ ಸಂದರ್ಭದಲ್ಲಿ ಸದರಿ ದಾಖಲೆಗಳ ಪರಿಶೀಲನೆಗೆ ಕರೆಯಬಹುದು ಎಂದು ನಿರ್ದಿಷ್ಟಪಡಿಸಿರುವುದರಿಂದ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ವೇಳೆ ತಮಗೆ ಸಂಬಂಧಿಸಿದ ಕ್ರಮಬದ್ಧವಾದ ದಾಖಲೆಗಳನ್ನು ಅಪ್ಲೋಡ್ ಮಾಡತಕ್ಕದ್ದು. ಮೂಲ ದಾಖಲೆ ಪರಿಶೀಲನೆಯ ನಂತರ ಅರ್ಹರೆಂದು ಕಂಡು ಬಂದ ಅಭ್ಯರ್ಥಿಗಳಿಗೆ e-mail ಮುಖಾಂತರ ಸಂದೇಶ ರವಾನಿಸಲಾಗುವುದು. ಈ ಬಗ್ಗೆ ಪತ್ರಿಕೆಗಳಲ್ಲಿ ಪ್ರಕಟಣೆ ಮೂಲಕ ಮಾಹಿತಿ ನೀಡಲಾಗುವುದು. ಅಲ್ಲದೇ ಸೂಚನಾ ಪತ್ರಗಳನ್ನು ಸ್ಪೀಡ್ ಪೋಸ್ಟ್ ಮೂಲಕ ರವಾನಿಸಲಾಗುವುದು. ಅಭ್ಯರ್ಥಿಗಳು ನಿಗದಿತ ದಿನಾಂಕ / ಸಮಯಕ್ಕೆ ಮೂಲ ದಾಖಲೆಗಳ ಪರಿಶೀಲನೆ / ಸಂದರ್ಶನಕ್ಕೆ ಸ್ವಂತ ವೆಚ್ಚದಲ್ಲಿ ಆಯೋಗದ ಕಛೇರಿಯಲ್ಲಿ ಹಾಜರಾಗತಕ್ಕದ್ದು.

## 8. ಶೈಕ್ಷಣಿಕ ವಿದ್ಯಾರ್ಹತೆ ಮತ್ತು ವಯೋಮಿತಿ:-

**8 (1) ಶೈಕ್ಷಣಿಕ ವಿದ್ಯಾರ್ಹತೆ:-** ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅನುಸೂಚಿಯಲ್ಲಿ ಆಯಾ ಹುದ್ದೆಗಳ ಮುಂದೆ ಸೂಚಿಸಿರುವ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಹೊಂದಿರಲೇಬೇಕು ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊಂದದೆ ಹೆಚ್ಚಿನ ವಿದ್ಯಾರ್ಹತೆಯನ್ನು ಹೊಂದಿದ್ದರೂ ಸಹ ಪರಿಗಣಿಸಲಾಗುವುದಿಲ್ಲ.

**8(2) ವಯೋಮಿತಿ:- ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ಗರಿಷ್ಠ ವಯೋಮಿತಿಯನ್ನು ಮೀರಬಾರದು.**

ಕನಿಷ್ಠ - 18 ವರ್ಷಗಳು
ಗರಿಷ್ಠ – 35 ವರ್ಷಗಳು
ಪ್ರವರ್ಗ- 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ 38 ವರ್ಷಗಳು
ಪ.ಜಾ, ಪ.ಪಂ., ಪ್ರವರ್ಗ-1ರ ಅಭ್ಯರ್ಥಿಗಳಿಗೆ 40 ವರ್ಷಗಳು

ಸರ್ಕಾರದ ಆದೇಶ ಸಂಖ್ಯೆ ಲೋಇ 166 ಸೇಸಕಿ 2018 ದಿನಾಂಕ 08-11-2019 ರ ತಿದ್ದುಪಡಿ ದಿ: 03-12-2019 ರಂತೆ ಈ ಹಿಂದೆ ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು(ದಕ್ಷಿಣ), ಲೋಕೋಪಯೋಗಿ ಇಲಾಖೆ, ಬೆಂಗಳೂರು, ಇವರ ಅಧಿಸೂಚನೆ ಸಂಖ್ಯೆ ಸಿಬಿಎಸ್ 187 ಸಇಂ:ಕಿಇಂ:ನೇರ ನೇಮಕಾತಿ:ಇಎಸ್ ಸಿ 2018-19 ದಿನಾಂಕ 07-03-2019 ರನ್ವಯ ಅರ್ಜಿ ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕ 10-04-2019 ಕ್ಕೆ ಅರ್ಜಿಗಳನ್ನು ಸಲ್ಲಿಸಿದ್ದ ಅಭ್ಯರ್ಥಿಗಳು ನಂತರದ ಅವಧಿಯಿಂದ ವಯೋಮಿತಿ ಮೀರಿದ್ದಲ್ಲಿ ಪ್ರಸ್ತುತ ಆಯೋಗವು ಹೊರಡಿಸಿರುವ ಅಧಿಸೂಚನೆಯ ಕೊನೆಯ ದಿನಾಂಕಕ್ಕೆ ಅನ್ವಯವಾಗುವಷ್ಟು ವಯೋಮಿತಿ ಸಡಿಲಿಕೆ ನೀಡಲಾಗುವುದು. ಈ ಸಂಬಂಧ ಆನ್ ಲೈನ್ ಅರ್ಜಿಯಲ್ಲಿ ಈ ಹಿಂದೆ ಅರ್ಜಿ ಸಲ್ಲಿಸಿದ್ದ ವಿವರಗಳನ್ನು ಕಡ್ಡಾಯವಾಗಿ ಭರ್ತಿ ಮಾಡಬೇಕಾಗಿರುತ್ತದೆ ಹಾಗೂ ಆಯೋಗವು ಅಪೇಕ್ಷಿಸಿದಾಗ ಹಿಂದಿನ ಅಧಿಸೂಚನೆಗೆ ಸಲ್ಲಿಸಿರುವ ಅರ್ಜಿ ಪ್ರತಿಯನ್ನು ಹಾಜರುಪಡಿಸಬೇಕು.

ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮ 1977ರಲ್ಲಿ ನಿರ್ದಿಷ್ಟಪಡಿಸಿರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

| | | |
|---|---|---|
| (ಅ) | ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿ ರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |
| (ಆ) | ಮಾಜಿ ಸೈನಿಕನಾಗಿದ್ದಲ್ಲಿ | ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು |
| (ಇ) | National Cadet Corps ನಲ್ಲಿ ಪೂರ್ಣ ಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ | ಕೆಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| (ಈ) | ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕನಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಅಭ್ಯರ್ಥಿಗಳಿಗೆ | ಗ್ರಾಮ ಸಮೂಹ ಪರಿಶೀಲಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| (ಉ) | ಅಂಗವಿಕಲ ಅಭ್ಯರ್ಥಿಗಳಿಗೆ | 10 ವರ್ಷಗಳು |
| (ಊ) | ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವ ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ |

| | | |
|---|---|---|
| | | ಅಷ್ಟು ವರ್ಷಗಳು |
| (ಌ) | ವಿಧವೆಯಾಗಿದ್ದಲ್ಲಿ (ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡು ಆಯೋಗವು ಸೂಚಿಸಿದಾಗ ಅದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು). | 10 ವರ್ಷಗಳು |
| (ೡ) | ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1957ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್ ರಿಂದ ಪಡೆದಿಟ್ಟುಕೊಂಡು ಆಯೋಗವು ಸೂಚಿಸಿದಾಗ ಅದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. | 10 ವರ್ಷಗಳು |

## 9. ಮೀಸಲಾತಿ ಪ್ರಮಾಣ ಪತ್ರಗಳು:-

| | |
|---|---|
| (1) ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು | ಜಾತಿ ಮೀಸಲಾತಿ ಕೋರುವ ಎಲ್ಲಾ ಅಭ್ಯರ್ಥಿಗಳು ಸಂಬಂಧಿಸಿದ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡಿರಬೇಕು.<br>ಮೀಸಲಾತಿ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾದ ನಮೂನೆಗಳು :-<br>ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು — ನಮೂನೆ `ಡಿ'<br>ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು — ನಮೂನೆ `ಇ<br>ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು — ನಮೂನೆ `ಎಫ್'<br>* ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ. |
| | ಹಿಂದುಳಿದ ವರ್ಗಗಳ ಪ್ರವರ್ಗ-2(ಎ), ಪ್ರವರ್ಗ-2(ಬಿ), ಪ್ರವರ್ಗ-3(ಎ) ಮತ್ತು ಪ್ರವರ್ಗ-3(ಬಿ) ಮೀಸಲಾತಿ ಪ್ರಮಾಣ ಪತ್ರಗಳು 05 ವರ್ಷ ಚಾಲ್ತಿಯಲ್ಲಿರುತ್ತವೆ(Government Notification No SWD 155 BCA 2012 Dt: 17-02-2012 ರನ್ವಯ). ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರತಕ್ಕದ್ದು. |
| | ಪ.ಜಾ/ಪ.ಪಂ/ಪ್ರ.1 ರ ಅಭ್ಯರ್ಥಿಗಳು ಪಡೆದಿರುವ/ಪಡೆಯುವ ಪ್ರಮಾಣ ಪತ್ರಗಳು ಜೀವಿತ ಅವಧಿಯವರೆವಿಗೆ ಅಥವಾ ರದ್ದು ಮಾಡುವವರೆವಿಗೆ ಸಿಂಧುತ್ವವನ್ನು ಹೊಂದಿದ್ದು, ಇಂತಹ ಪ್ರಮಾಣ ಪತ್ರಗಳನ್ನು ದಿನಾಂಕದ ಮಿತಿಯಿಲ್ಲದೇ ಪರಿಗಣಿಸಲಾಗುವುದು (ಸರ್ಕಾರದ ಸುತ್ತೋಲೆ ಸಂಖ್ಯೆ SWD 155 BCA 2011 ದಿನಾಂಕ 22-02-2012). |
| (2) ಗ್ರಾಮೀಣ ಅಭ್ಯರ್ಥಿ ಗಳಿಗೆ ಮೀಸಲಾತಿ | ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 08 ಸೆನೆನಿ 2001 ದಿನಾಂಕ:13-02-2001 ರನ್ವಯ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. |
| | ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನುಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2ನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ (Creamy layer) ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್ ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). ಅಭ್ಯರ್ಥಿಗಳು ನಮೂನೆ-1 ರಲ್ಲಿಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರತಕ್ಕದ್ದು. |

| | |
|---|---|
| | ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು ಹಾಗೂ ಅಂತಹವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ. |
| | ಜಾತಿ ಹಾಗೂ ಗ್ರಾಮೀಣ ಮೀಸಲಾತಿ ಕೋರಿರುವ ಅಭ್ಯರ್ಥಿಗಳ ಜಾತಿ ಮೀಸಲಾತಿ ಪ್ರಮಾಣ ಪತ್ರಗಳು ಅಸಿಂಧುವಾದಲ್ಲಿ, ಅಂತಹವರು ಗ್ರಾಮೀಣ ಮೀಸಲಾತಿಗೂ ಸಹ ಅನರ್ಹರಾಗುತ್ತಾರೆ. |
| (3) ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ ಮೀಸಲಾತಿ | ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 71 ಸೆನೆನಿ 2001 ದಿನಾಂಕ: 24-10-2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). |
| (4) ಮಾಜಿ ಸೈನಿಕರಿಗೆ ಮೀಸಲಾತಿ | (1) ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಾಗಿಲ್ಲದೇ) ಸೇವೆ ಸಲ್ಲಿಸಿರುವ ವ್ಯಕ್ತಿ ಎಂದು ಅರ್ಥ. ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು<br>(ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ<br>ಅಥವಾ<br>(ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು<br>ಅಥವಾ<br>(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ<br>ಅಥವಾ<br>(ಈ) ತನ್ನ ಸ್ವಂತ ಕೋರಿಕೆಯ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತುಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು.<br>(i) ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.<br>(ii) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.<br>(iii) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು |
| | ವಿವರಣೆ :- ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ |

| | |
|---|---|
| | ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.<br>ಸೈನಿಕರ ಸೇವಾ ಒಪ್ಪಂದದ ಮುಕ್ತಾಯಕ್ಕೆ ಮುನ್ನ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅವರ ಮೇಲಾಧಿಕಾರಿಗಳಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದು ಅದರ ಮೂಲ ಪ್ರತಿಯನ್ನು ಕಡ್ಡಾಯವಾಗಿ ಹಾಜರುಪಡಿಸಬೇಕು |
| | 2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಯುದ್ಧ/ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಅಂಗವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ. |
| | 3) ಸೇನೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು(ಗುರುತಿನ ಚೀಟಿ, ನಿವೃತ್ತಿ ವೇತನ ಸಂದಾಯದ ಪತ್ರ, ಬಿಡುಗಡೆ ಪುಸ್ತಕ ಮತ್ತು ಪದವಿ ಪ್ರಮಾಣ ಪತ್ರ) /ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಯುದ್ಧ / ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಶಾಶ್ವತ ಅಂಗವಿಕಲತೆ ಹೊಂದಿದ ಬಗ್ಗೆ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. |
| | 4) ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಯುದ್ಧ / ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಶಾಶ್ವತ ಅಂಗವಿಕಲತೆ ಹೊಂದಿದ ಬಗ್ಗೆ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ. |
| (5) ಅಂಗವಿಕಲ ಅಭ್ಯರ್ಥಿ | ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 50 ಎಸ್ಆರ್ಆರ್ 2000 ದಿನಾಂಕ 03-09-2005 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ-`ಎ' ಮತ್ತು `ಬಿ' ಗುಂಪಿನ ಹುದ್ದೆಗಳಿಗೆ ಶೇಕಡ 3 ರಷ್ಟು ಮತ್ತು ಗ್ರೂಪ್-`ಸಿ' ಹುದ್ದೆಗಳಿಗೆ ಶೇಕಡ 5 ರಷ್ಟು ಅಂಗವಿಕಲರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೆನೆನಿ 2005 ದಿನಾಂಕ 19-11-2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿಹೆಚ್‌ಪಿ 2010 ದಿನಾಂಕ 18-02-2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ/ತಾಲ್ಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ / ಜಿಲ್ಲಾ ಮಟ್ಟದ ವೈದ್ಯಕೀಯ ಪ್ರಾಧಿಕಾರ/ ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು / ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲು ಬರುವುದಿಲ್ಲ. |
| (6) ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ(PDP) | ಗ್ರೂಪ್- ಸಿ ಹುದ್ದೆಗಳಿಗೆ ಸಂಬಂಧಿಸಿದಂತೆ ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 23 ಸೆನೆನಿ 99 ದಿನಾಂಕ 23-11-2000 ರನ್ವಯ ಯೋಜನೆಗಳಿಂದ ನಿರ್ವಸಿತರಾದ (ಆದರೆ ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬ ಅಭ್ಯರ್ಥಿಗಳಿಗೆ ಈ ಮೀಸಲಾತಿ ಅನ್ವಯವಾಗುವುದಿಲ್ಲ) ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡಿರತಕ್ಕದ್ದು. ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು |

| | |
|---|---|
| | ರದ್ದುಪಡಿಸಲಾಗುವುದು. |
| (7) ಅನುಚ್ಛೇಧ 371 (ಜೆ) ರಂತೆ ಹೈದರಾಬಾದ್ – ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ: | ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್ – ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು 2013ಕ್ಕೆ ಸಂಬಂಧಿಸಿದಂತೆ ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಅನುಬಂಧ-ಎ ಯಲ್ಲಿರುವ ನಮೂನೆಯಲ್ಲಿಯೇ ಅರ್ಹತಾ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರವಾದ ಸಂಬಂಧಪಟ್ಟ ಉಪ ವಿಭಾಗದ ಸಹಾಯಕ ಆಯುಕ್ತರಿಂದ ಪಡೆದಿಟ್ಟುಕೊಳ್ಳತಕ್ಕದ್ದು. ಮೂಲ ದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). ಈ ನಮೂನೆಯನ್ನು ಹೊರತು ಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಅರ್ಹತಾ ಪ್ರಮಾಣ ಪತ್ರವನ್ನು ತಿರಸ್ಕರಿಸಲಾಗುವುದು. |
| (7.1) ಸರ್ಕಾರಿ ಸೇವೆಯಲ್ಲಿರುವ ನೌಕರರಿಗೆ ಹೈದರಾಬಾದ್ - ಕರ್ನಾಟಕ ಮೀಸಲಾತಿ:- | ಸರ್ಕಾರಿ ಸೇವೆಯಲ್ಲಿರುವ ನೌಕರರು ದಿನಾಂಕ 29-01-2014 ರಂದು ಹೊರಡಿಸಲಾದ ಅಧಿಸೂಚನೆ-1 ಸಂಖ್ಯೆ ಡಿಪಿಎಆರ್ 43 ಹೆಚ್‌ಕೆಸಿ 2013 ರಲ್ಲಿನ ಅನುಬಂಧ-ಎ ನಲ್ಲಿ ಇರುವಂತೆ ತಮ್ಮ ಸೇವಾ ಪುಸ್ತಕದಲ್ಲಿ ದಿನಾಂಕ:01-01-2013 ಕ್ಕಿಂತ ಮುಂಚಿನ ನಮೂದಿನಲ್ಲಿ ಅವರ ಸ್ವಂತ ಊರು ಅಥವಾ ಸ್ಥಳಕ್ಕೆ ಸಂಬಂಧಿಸಿದಂತೆ ಹೈದರಾಬಾದ್ - ಕರ್ನಾಟಕ ಪ್ರದೇಶದ ಜಿಲ್ಲೆಗಳಾದ ಬೀದರ್, ಕಲಬುರ್ಗಿ, ರಾಯಚೂರು, ಕೊಪ್ಪಳ, ಬಳ್ಳಾರಿ ಮತ್ತು ಯಾದಗಿರಿ ಕಂದಾಯ ಜಿಲ್ಲೆಗಳ ಅಡಿಯಲ್ಲಿ ಬರುವಂತಹ ಪ್ರದೇಶದ ನಮೂದು ಇದ್ದ ಪಕ್ಷದಲ್ಲಿ, ಅಂತಹ ಅಭ್ಯರ್ಥಿಗಳು ಕಛೇರಿ ಮುಖ್ಯಸ್ಥರಿಂದ ದಿನಾಂಕ:29-01-2014ರ ಅಧಿಸೂಚನೆ-1 ರಲ್ಲಿನ ನಿಯಮ 5(2) ರಲ್ಲಿ ನೀಡಲಾದ ಸ್ವಗ್ರಾಮ ಪ್ರಮಾಣ ಪತ್ರವನ್ನು ಆಧರಿಸಿ ಅಂತಹವರ ಅರ್ಜಿಯನ್ನು ಸ್ಥಳೀಯ ವೃಂದದಲ್ಲಿ ಲಭ್ಯವಿರುವ ಹುದ್ದೆಗೆದುರಾಗಿ ಪರಿಗಣಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). ಈ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಪ್ರಮಾಣ ಪತ್ರವನ್ನು ತಿರಸ್ಕರಿಸಲಾಗುವುದು. |
| | ವಿಶೇಷ ಸೂಚನೆ:- ಸರ್ಕಾರಿ ಸುತ್ತೋಲೆ ಸಂಖ್ಯೆ ಸಿಆಸುಇ 3 ಹೈಕಕೋ 2018 ದಿನಾಂಕ 06-06-2020 ರನ್ವಯ ಹೈದ್ರಾಬಾದ್ – ಕರ್ನಾಟಕ ಸ್ಥಳೀಯ ವ್ಯಕ್ತಿಗಳು ಸ್ಥಳೀಯ ಮತ್ತು ಮಿಕ್ಕುಳಿದ ವೃಂದದ ಹುದ್ದೆಗಳೆರಡಕ್ಕೂ ಅರ್ಜಿ ಸಲ್ಲಿಸಲು ಅರ್ಹರಿದ್ದು, ಎರಡು ವೃಂದದಲ್ಲಿನ ಒಂದೇ ಇಲಾಖೆಯ / ಪದನಾಮದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಂದ ಆಯ್ಕೆ ಆದ್ಯತೆಯನ್ನು ನಮೂದಿಸುವ ಬಗ್ಗೆ ಆನ್ ಲೈನ್ ಅರ್ಜಿಯಲ್ಲಿ ಅವಕಾಶ ನೀಡಲಾಗುವುದು. ಒಂದು ವೇಳೆ ಸ್ಥಳೀಯ ಅಭ್ಯರ್ಥಿಯು ಮಿಕ್ಕುಳಿದ ವೃಂದದ ಹುದ್ದೆಯನ್ನು ಆಯ್ಕೆಮಾಡಿಕೊಂಡು ನೇಮಕಾತಿ ಹೊಂದಿದ್ದಲ್ಲಿ ಅಂತಹ ಅಭ್ಯರ್ಥಿಗೆ ಜಾರಿಯಲ್ಲಿರುವ ನಿಯಮದಂತೆ ತನ್ನ ಸೇವಾವಧಿಯಲ್ಲಿ ಅನುಚ್ಛೇಧ 371(ಜೆ) ಮೀಸಲಾತಿ ಸೌಲಭ್ಯವು ದೊರೆಯುವುದಿಲ್ಲ. |
| (8) ಸೇವಾನಿರತ ಅಭ್ಯರ್ಥಿ | ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 5(4)ರನ್ವಯ "ಯಾರೇ ಅರ್ಜಿದಾರನು ತಾನು ಅರ್ಜಿ ಸಲ್ಲಿಸುವ ಸಮಯದಲ್ಲಿ ಸರ್ಕಾರದ ಯಾವುದೇ ಇತರೆ ಇಲಾಖೆಯಲ್ಲಿ ಅಥವಾ ಯಾವುದೇ ಇತರ ರಾಜ್ಯ ಸರ್ಕಾರದ ಅಥವಾ ಕೇಂದ್ರ ಸರ್ಕಾರದ ಅಥವಾ ಈ ಸಂಬಂಧವಾಗಿ ಸರ್ಕಾರವು ನಿರ್ದಿಷ್ಟಪಡಿಸಿದ ಯಾವುದೇ ಇತರ ಪ್ರಾಧಿಕಾರದಲ್ಲಿ ಖಾಯಂ ಅಥವಾ ತಾತ್ಕಾಲಿಕ ನೌಕರಿಯಲ್ಲಿದ್ದರೆ ಮತ್ತು ಆತನು ಯಾರ ಅಧೀನದಲ್ಲಿ ಉದ್ಯೋಗದಲ್ಲಿರುವನೋ ಆ ಇಲಾಖಾ ಮುಖ್ಯಸ್ಥರಿಂದ ಅಥವಾ ಸಂದರ್ಭಾನುಸಾರ ಸರ್ಕಾರದಿಂದ ಅಥವಾ ಪ್ರಾಧಿಕಾರದಿಂದ ಒಪ್ಪಿಗೆ ಪಡೆಯದೆಯೇ ಅರ್ಜಿಯನ್ನು ಸಲ್ಲಿಸಿದ್ದರೆ ಆತನು ಸರ್ಕಾರದ ಯಾವುದೇ ಇಲಾಖೆಯಲ್ಲಿನ ಹುದ್ದೆಯ ನೇಮಕಕ್ಕೆ ಅರ್ಹನಾಗಿರತಕ್ಕದ್ದಲ್ಲ. ಪರಂತು, ಈ ಉಪ ನಿಯಮವು ಸರ್ಕಾರದ ಯಾವುದೇ ಇಲಾಖೆಯಲ್ಲಿ ಸ್ಥಳೀಯ ಅಭ್ಯರ್ಥಿಯಾಗಿ ನೇಮಕಗೊಂಡಿರುವ ವ್ಯಕ್ತಿಗೆ ಅವನನ್ನು ಎಲ್ಲಿಯವರೆಗೆ ಹಾಗೆಂದು ಪರಿಗಣಿಸಲಾಗುವುದೋ ಅಲ್ಲಿಯವರೆಗೆ ಅನ್ವಯವಾಗತಕ್ಕದ್ದಲ್ಲ". (ಈ ಪ್ರಮಾಣ ಪತ್ರದ |

| | |
|---|---|
| | ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). |
| | ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಮುನ್ನ ಅನುಮತಿಯನ್ನು ಅಂದರೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು (NOC) ಕಡ್ಡಾಯವಾಗಿ ಅವರುಗಳ ನೇಮಕಾತಿ ಪ್ರಾಧಿಕಾರಿಗಳ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. |

## ವಿಶೇಷ ಸೂಚನೆಗಳು :-

ಮೇಲ್ಕಂಡ ಮೀಸಲಾತಿಗಳನ್ನು ಕೋರುವ ಎಲ್ಲಾ ಅಭ್ಯರ್ಥಿಗಳು ಸಂಬಂಧಿಸಿದ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ **ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡು ಅರ್ಜಿಯೊಂದಿಗೆ ಕಡ್ಡಾಯವಾಗಿ ಅಪ್ಲೋಡ್ ಮಾಡಬೇಕು, ತಪ್ಪಿದ್ದಲ್ಲಿ ಅಂತಹವರ ಮೀಸಲಾತಿಯನ್ನು ಪರಿಗಣಿಸಲಾಗುವುದಿಲ್ಲ**

1) ಕೊನೆಯ ದಿನಾಂಕದ ನಂತರ ಪಡೆದ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.
2) ಮೂಲ ದಾಖಲಾತಿ ಪರಿಶೀಲನೆ ಸಮಯದಲ್ಲಿ ಸದರಿ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಸಾಮಾನ್ಯ ಅರ್ಹತೆಯಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು.
3) ಮೇಲ್ಕಂಡ ಎಲ್ಲಾ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ.
4) ಇತರೆ ನಮೂನೆಗಳಲ್ಲಿ ಸಲ್ಲಿಸಲ್ಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

## 10. ಆಯೋಗದೊಡನೆ ಪತ್ರ ವ್ಯವಹಾರ:-

ಆಯೋಗವು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ವಿಳಾಸ ಬದಲಾವಣೆ ಇದ್ದಲ್ಲಿ ಅಭ್ಯರ್ಥಿಗಳು ಲಿಖಿತ ಮನವಿಯ ಮೂಲಕ ಆಯೋಗದ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ಆಯೋಗವು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ಆಯೋಗವು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು. ಅಭ್ಯರ್ಥಿಗಳು ಆಯೋಗದೊಡನೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯಲ್ಲಿ ಕೆಳಕಂಡ ಮಾಹಿತಿಗಳು ಒದಗಿಸತಕ್ಕದ್ದು:-

(i) ಹುದ್ದೆಯ / ವಿಷಯದ ಹೆಸರು
(ii) ಅಭ್ಯರ್ಥಿಯ ಪೂರ್ಣ ಹೆಸರು ಹಾಗೂ ಇ-ಮೇಲ್ ಐಡಿ
(iii) ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ

## 11. ಸೂಚನೆಗಳು:

| |
|---|
| ಕೆಳಕಂಡ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಅರ್ಜಿಯೊಂದಿಗೆ ಅಪ್ಲೋಡ್ ಮಾಡಬೇಕು ತಪ್ಪಿದ್ದಲ್ಲಿ ಅವರ ಮೀಸಲಾತಿ / ಅಭ್ಯರ್ಥಿತ್ವವನ್ನು ಪರಿಗಣಿಸಲಾಗುವುದಿಲ್ಲ ಹಾಗೂ ಮೂಲ ದಾಖಲಾತಿ ಪರಿಶೀಲನೆ ಸಮಯದಲ್ಲಿ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ಹಾಜರುಪಡಿಸತಕ್ಕದ್ದು. |
| 1)ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರುವ ಬಗ್ಗೆ ಪ್ರಮಾಣ ಪತ್ರಗಳು/ಎಲ್ಲಾ ವರ್ಷಗಳ ಅಂಕಪಟ್ಟಿಗಳು ಹಾಗೂ ಪದವಿಯ ಘಟಿಕೋತ್ಸವ ಪ್ರಮಾಣ ಪತ್ರ. |
| 2) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿ/ಎಸ್.ಎಸ್.ಎಲ್.ಸಿ ವರ್ಗಾವಣೆಯ ಪ್ರಮಾಣ ಪತ್ರ /ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉಧೃತ ಭಾಗ (Extract of cumulative record). |
| 3) ಸೈನಿಕ ಸೇವೆಯಿಂದ ಬಿಡುಗಡೆಯಾದ/ ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಪೂರ್ಣವಾಗಿ) (Discharge certificate) ಮತ್ತು ಪೆನ್ಷನ್ ಪಡೆಯುತ್ತಿರುವ ದಾಖಲೆಯ ಪ್ರತಿ/ ಮಾಜಿ ಸೈನಿಕರ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿರುವಾಗ ಯುದ್ಧ/ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಅಂಗವಿಕಲತೆ ಹೊಂದಿದ ಬಗ್ಗೆ ಪ್ರಮಾಣ ಪತ್ರ (Dependant certificate) (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ). |

| |
|---|
| 4) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ್‌ರಿಂದ ಪಡೆದ ಪ್ರಮಾಣ ಪತ್ರ.(ಮೀಸಲಾತಿ ಕೋರಿದ್ದಲ್ಲಿ) |
| 5) ಸಾಮಾನ್ಯ ಅರ್ಹತೆ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2ರಲ್ಲಿ / ಇತರೆ ಅಭ್ಯರ್ಥಿಗಳು ನಮೂನೆ- 2ರಲ್ಲಿ (ಮೀಸಲಾತಿ ಕೋರಿದ್ದಲ್ಲಿ) |
| 5) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ) |
| 6) ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ) |
| 7) ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ) |
| 8) ಹೈದರಾಬಾದ್ – ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರ(ಮೀಸಲಾತಿ ಕೋರಿದ್ದಲ್ಲಿ) |
| 9) ಸರ್ಕಾರಿ ಸೇವೆಯಲ್ಲಿರುವ ನೌಕರರಿಗೆ ಹೈದರಾಬಾದ್ ಕರ್ನಾಟಕ ಮೀಸಲಾತಿ ಪ್ರಮಾಣ ಪತ್ರ(ಮೀಸಲಾತಿ ಕೋರಿದ್ದಲ್ಲಿ) |
| 10) ಸೇವೆಯಲ್ಲಿರುವ ಅಭ್ಯರ್ಥಿಗಳು ನಿರಾಕ್ಷೇಪಣಾ (NOC) ಪ್ರಮಾಣ ಪತ್ರ |
| 11) ಫೋಟೋ ಮತ್ತು ಸಹಿಯನ್ನು /ದಾಖಲೆಗಳನ್ನು ಅಪ್‌ಲೋಡ್ ಮಾಡದೇ ಇರುವ ಅಪೂರ್ಣವಾಗಿರುವ ದಾಖಲೆಗಳನ್ನು ಅಪ್‌ಲೋಡ್ ಮಾಡಿರುವ ಹಾಗೂ ಶುಲ್ಕ ಸಂದಾಯ ಮಾಡದ ಅರ್ಜಿಗಳನ್ನು ತಿರಸ್ಕರಿಸಲಾಗುವುದು. |
| 12) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ |
| 13) ಆಯಾ ಹುದ್ದೆಗಳಿಗೆ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ, ಇತ್ಯಾದಿಗಳಿಗನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ತಪ್ಪು ಮಾಹಿತಿ ನೀಡಿದಲ್ಲಿ ಅಂತಹ ಅಭ್ಯರ್ಥಿಗಳನ್ನು ಆಯೋಗವು ನಡೆಸುವ ಯಾವುದೇ ನೇಮಕಾತಿ / ಪರೀಕ್ಷೆಗಳಿಂದ 03 ವರ್ಷಕ್ಕೆ ಡಿಬಾರ್ ಮಾಡಲಾಗುವುದು. ಆದುದರಿಂದ, ಅರ್ಜಿ ಸಲ್ಲಿಸುವ ಮುನ್ನ ಅವರು ನೀಡಿರುವ ಎಲ್ಲಾ ಮಾಹಿತಿಯು ಸರಿಯಾಗಿದೆ ಎಂದು ಖಚಿತಪಡಿಸಿಕೊಂಡು ದೃಢೀಕರಣ ನೀಡುವಾಗ ಎಚ್ಚರ ವಹಿಸಬೇಕು. |

12. **ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು:**

| | | |
|---|---|---|
| ಕೇಂದ್ರ ಕಛೇರಿಯ ಮಾಹಿತಿ ಕೇಂದ್ರ | : | 080-30574957/ 30574901 |
| ಪ್ರಾಂತೀಯ ಕಛೇರಿ ಮೈಸೂರು | : | 0821-2545956 |
| ಪ್ರಾಂತೀಯ ಕಛೇರಿ ಬೆಳಗಾವಿ | : | 0831-2475345 |
| ಪ್ರಾಂತೀಯ ಕಛೇರಿ ಕಲಬುರ್ಗಿ | : | 08472-227944 |
| ಪ್ರಾಂತೀಯ ಕಛೇರಿ ಶಿವಮೊಗ್ಗ | : | 08182-228099 |

13. **ದುರ್ನಡತೆ:-**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ಹುದ್ದೆಯ ಸಂದರ್ಶನದಿಂದ /ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

ಸಹಿ/-

(ಜಿ.ಸತ್ಯವತಿ)
ಕಾರ್ಯದರ್ಶಿ,
ಕರ್ನಾಟಕ ಲೋಕಸೇವಾ ಆಯೋಗ

‘ಅನುಸೂಚಿ

<table>
<tr><th>ಹುದ್ದೆಗಳ ಅನುಕ್ರಮ ಸಂಖ್ಯೆ</th><th>ಹುದ್ದೆಯ ಸಂಕೇತ / POST CODE</th><th>ಹುದ್ದೆಯ ಪದನಾಮ ಮತ್ತು ಸಂಖ್ಯೆ</th><th>ವೇತನ ಶ್ರೇಣಿ</th><th>ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆ</th><th>ವಯೋಮಿತಿ, ವಯಸ್ಸು ವರ್ಷಗಳಲ್ಲಿ</th><th>ಹುದ್ದೆಗಳ ವರ್ಗೀಕರಣ</th></tr>
<tr><td colspan="7">ಗ್ರೂಪ್-`` ಬಿ” ಹುದ್ದೆಗಳು</td></tr>
<tr><td>450-1109</td><td>01</td><td>ಲೋಕೋಪಯೋಗಿ ಇಲಾಖೆಯಲ್ಲಿನ ಸಹಾಯಕ ಇಂಜಿನಿಯರ್ (ಗ್ರೇಡ್-1) (ಸಿವಿಲ್) – 660 (600+60-ಹೈಕ) ಹುದ್ದೆಗಳು<br>Assistant Engineer (Grade-I) (Civil) in the Dept.of Public Works – 660(600+60-HK) posts</td><td>₹.43,100-83,900</td><td>Must be a holder of Degree in Civil Engineering or Construction Technology and Management or Building and Construction Technology or Civil Engineering and Planning or Civil Technology or Construction Technology or Construction Engineering and Management or Geo-Mechanics and Structures or Structural and Foundation Engineering or Structural Engineering and Construction granted by a University established by Law in India recognised by AICTE, New Delhi or a Diploma Certificate granted by the Institution of Engineers (India) that he has passed Parts-A & B of the Associate Membership Examination of the Institution of Engineers (India) in Civil Engineering or Construction Technology and Management Engineering.</td><td>ಕನಿಷ್ಠ – 18<br>ಗರಿಷ್ಠ – 35<br>ಪ್ರ.2ಎ, ಪ್ರ.2ಬಿ, ಪ್ರ.3ಎ, ಪ್ರ.3ಬಿ } 38<br>ಪ.ಜಾ, ಪ.ಪಂ., ಪ್ರ.1 } 40</td><td>ಉಳಿಕೆ ಮೂಲ ವೃಂದ – 600 ಹುದ್ದೆಗಳು
<table>
<tr><th>ಮೀಸಲಾತಿ</th><th>ಇ</th><th>ಮ</th><th>ಗ್ರಾ</th><th>ಮಾಸ್ಸೈ</th><th>ಕಮಾಅ</th><th>ಅಂ.ವಿ.</th><th>ಒಟ್ಟು</th></tr>
<tr><td>ಪ.ಜಾ</td><td>20</td><td>30</td><td>23</td><td>09</td><td>05</td><td>03 (01 * 01 ** 01 ***)</td><td>90</td></tr>
<tr><td>ಪ.ಪಂ.</td><td>06</td><td>06</td><td>04</td><td>02</td><td>-</td><td>-</td><td>18</td></tr>
<tr><td>ಪ್ರ.1</td><td>08</td><td>07</td><td>05</td><td>03</td><td>01</td><td>-</td><td>24</td></tr>
<tr><td>ಪ್ರ.2ಎ</td><td>20</td><td>30</td><td>23</td><td>09</td><td>05</td><td>03 (01 * 01 ** 01 ***)</td><td>90</td></tr>
<tr><td>ಪ್ರ.2ಬಿ</td><td>08</td><td>07</td><td>05</td><td>03</td><td>01</td><td>-</td><td>24</td></tr>
<tr><td>ಪ್ರ.3ಎ</td><td>08</td><td>07</td><td>05</td><td>03</td><td>01</td><td>-</td><td>24</td></tr>
<tr><td>ಪ್ರ.3ಬಿ</td><td>07</td><td>10</td><td>08</td><td>03</td><td>01</td><td>01**</td><td>30</td></tr>
<tr><td>ಸಾ.ಅ.</td><td>72</td><td>99</td><td>75</td><td>30</td><td>15</td><td>09 (03* 03** 03***)</td><td>300</td></tr>
<tr><td>ಒಟ್ಟು</td><td>149</td><td>196</td><td>148</td><td>62</td><td>29</td><td>16</td><td>600</td></tr>
<tr><td colspan="8">*ಶ್ರವಣದೋಷ / ಚಲನವಲನ ವೈಕಲ್ಯ / Cerebral Palsy (OA/OL) ** ಶ್ರವಣದೋಷ ಅಭ್ಯರ್ಥಿಗಳಿಗೆ *** ಚಲನವಲನ ವೈಕಲ್ಯ/ Cerebral Palsy (OA/OL) ಅಭ್ಯರ್ಥಿಗಳಿಗೆ</td></tr>
</table></td></tr>
</table>

<table>
<tr><td>(1)</td><td>(2)</td><td>(3)</td><td>(4)</td><td>(5)</td><td>(6)</td><td>(7)</td></tr>
<tr><td></td><td></td><td></td><td></td><td></td><td></td><td>
<u>ಹೈದ್ರಾಬಾದ್ ಕರ್ನಾಟಕ ವೃಂದ – 60 ಹುದ್ದೆಗಳು</u>
<table>
<tr><td>ಮೀಸಲಾತಿ</td><td>ಇ</td><td>ಮ</td><td>ಗ್ರಾ</td><td>ಮಾಸೈ</td><td>ಕಮಾಅ</td><td>ಅಂ.ವಿ.</td><td>ಒಟ್ಟು</td></tr>
<tr><td>ಪ.ಜಾ</td><td>02</td><td>03</td><td>03</td><td>01</td><td>-</td><td>01*</td><td>10</td></tr>
<tr><td>ಪ.ಪಂ.</td><td>01</td><td>01</td><td>-</td><td>-</td><td>-</td><td>-</td><td>02</td></tr>
<tr><td>ಪ್ರ.1</td><td>01</td><td>01</td><td>01</td><td>-</td><td>-</td><td>-</td><td>03</td></tr>
<tr><td>ಪ್ರ.2ಎ</td><td>02</td><td>03</td><td>03</td><td>-</td><td>-</td><td>01*</td><td>09</td></tr>
<tr><td>ಪ್ರ.2ಬಿ</td><td>01</td><td>01</td><td>-</td><td>-</td><td>-</td><td>-</td><td>02</td></tr>
<tr><td>ಪ್ರ.3ಎ</td><td>01</td><td>01</td><td>-</td><td>-</td><td>-</td><td>-</td><td>02</td></tr>
<tr><td>ಪ್ರ.3ಬಿ</td><td>01</td><td>01</td><td>-</td><td>-</td><td>-</td><td>-</td><td>02</td></tr>
<tr><td>ಸಾ.ಅ.</td><td>07</td><td>10</td><td>08</td><td>03</td><td>01</td><td>01*</td><td>30</td></tr>
<tr><td>ಒಟ್ಟು</td><td>16</td><td>21</td><td>15</td><td>04</td><td>01</td><td>03</td><td>60</td></tr>
<tr><td colspan="8">*ಶ್ರವಣದೋಷ / ಚಲನವಲನ ವೈಕಲ್ಯ / Cerebral Palsy (OA/OL)</td></tr>
</table>
</td></tr>
</table>

| (1) | (2) | (3) | (4) | (5) | (6) | (7) |
|---|---|---|---|---|---|---|
| | | | | | | |
| | 02 | ಲೋಕೋಪಯೋಗಿ ಇಲಾಖೆಯಲ್ಲಿನ ಕಿರಿಯ ಇಂಜಿನಿಯರ್ (ಸಿವಿಲ್) – 330 (325+05-ಹೈಕ) ಹುದ್ದೆಗಳು<br>Junior Engineer (Civil)in the Dept.of Public Works – 330 (325+05-HK) posts | ₹.33,450-62600 | Diploma in Civil Engineering (General) | ಕನಿಷ್ಠ – 18<br>ಗರಿಷ್ಠ – 35<br>ಪ್ರ.2ಎ, ಪ್ರ.2ಬಿ, ಪ್ರ.3ಎ, ಪ್ರ.3ಬಿ } 38<br>ಪ.ಜಾ, ಪ.ಪಂ, ಪ್ರ.1 } 40 | See below |

ಗ್ರೂಪ್-`` ಸಿ ” ಹುದ್ದೆಗಳು

**ಉಳಿಕೆ ಮೂಲ ವೃಂದ – 325 ಹುದ್ದೆಗಳು**

| ಮೀಸಲಾತಿ | ಇ | ಮ | ಗ್ರಾ | ಮಾಸೈ | ಕಮಾಅ | ಯೋ.ನಿ | ಅಂ.ವಿ. | ಒಟ್ಟು |
|---|---|---|---|---|---|---|---|---|
| ಪ.ಜಾ | 07 | 16 | 13 | 05 | 03 | 03 | 02(1*+1**) | 49 |
| ಪ.ಪಂ. | 02 | 03 | 02 | 01 | - | 01 | 01(*/**) | 10 |
| ಪ್ರ.1 | 04 | 03 | 03 | 02 | - | - | 01(*/**) | 13 |
| ಪ್ರ.2ಎ | 07 | 16 | 13 | 05 | 03 | 02 | 02(1*+1**) | 49 |
| ಪ್ರ.2ಬಿ | 04 | 03 | 03 | 02 | - | - | 01(*/**) | 13 |
| ಪ್ರ.3ಎ | 04 | 03 | 03 | 02 | - | - | 01(*/**) | 13 |
| ಪ್ರ.3ಬಿ | 02 | 05 | 05 | 01 | 01 | 01 | 01(*/**) | 16 |
| ಸಾ.ಅ. | 29 | 53 | 41 | 16 | 08 | 08 | 8(4*/4**) | 163 |
| ಒಟ್ಟು | 59 | 102 | 83 | 34 | 15 | 15 | 17 | 325 |
| ಸೂಚನೆ:- * Hearing Impairment ** Locomotor Disability (OA,OL & BL) | | | | | | | | |

**ಹೈದ್ರಾಬಾದ್ ಕರ್ನಾಟಕ ಸ್ಥಳೀಯ ವೃಂದ – 05 ಹುದ್ದೆಗಳು**

| ಮೀಸಲಾತಿ | ಇ | ಮ | ಒಟ್ಟು |
|---|---|---|---|
| ಪ.ಜಾ | 01 | - | 01 |
| ಪ.ಪಂ. | 01 | - | 01 |
| ಪ್ರ.1 | 01 | - | 01 |
| ಸಾ.ಅ | 01 | 01 | 02 |
| ಒಟ್ಟು | 04 | 01 | 05 |

ಸಹಿ/-
(ಜಿ.ಜಿಸತ್ಯವತಿ)
ಕಾರ್ಯದರ್ಶಿ,
ಕರ್ನಾಟಕ ಲೋಕ ಸೇವಾ ಆಯೋಗ

## ಅಭ್ಯರ್ಥಿಗಳಿಗೆ ಆನ್ ಲೈನ್ ಅರ್ಜಿ ಭರ್ತಿ ಮಾಡುವ ಬಗ್ಗೆ ಸೂಚನೆಗಳು

ಆನ್-ಲೈನ್‌ನಲ್ಲಿ ಅರ್ಜಿ ಭರ್ತಿ ಮಾಡಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಗಳು ಅಧಿಸೂಚನೆಯಲ್ಲಿನ ಎಲ್ಲಾ ಷರತ್ತುಗಳನ್ನು ಪೂರೈಸಿರುತ್ತಾರೆ ಎಂದಲ್ಲ. ತದನಂತರದಲ್ಲಿ ಅರ್ಜಿಗಳನ್ನು ಪರಿಶೀಲನೆಗೆ ಒಳಪಡಿಸಲಾಗುವುದು ಹಾಗೂ ಯಾವುದೇ ಹಂತದಲ್ಲಿಯಾಗಲಿ ನ್ಯೂನ್ಯತೆಗಳು ಕಂಡು ಬಂದಲ್ಲಿ ಅಂತಹ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಈ ಅರ್ಜಿ ಸಲ್ಲಿಸುವ ಪ್ರಕ್ರಿಯೆಯು ಒಂದು ಬಾರಿಯ ನೋಂದಣಿ ಪ್ರಕ್ರಿಯೆಯನ್ನು ಒಳಗೊಂಡಿದ್ದು ಅಭ್ಯರ್ಥಿಗಳು ನೀಡಿರುವ ಮಾಹಿತಿಯನ್ನು ಮುಂದಿನ ಎಲ್ಲಾ ಅಧಿಸೂಚನೆಗಳಿಗೂ ಪರಿಗಣಿಸಲಾಗುವುದರಿಂದ, **ಅವರ 'Profile creation / ರುಜುವಾತುಗಳು ಸೃಷ್ಟಿಸುವ '** ಹಂತದಲ್ಲಿ ಅತೀ ಜಾಗರೂಕತೆಯಿಂದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಬೇಕಾಗಿದೆ. ಅಭ್ಯರ್ಥಿಗಳು ಸೂಚನೆಗಳನ್ನು ಹಂತ ಹಂತವಾಗಿ ಓದಿಕೊಳ್ಳತಕ್ಕದ್ದು. ಎಲ್ಲಾ ಸೂಚನೆಗಳನ್ನು ಓದಿದ ನಂತರವೇ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು.

--------

1. ಅಭ್ಯರ್ಥಿಗಳು KPSC ಅಂತರ್ಜಾಲದ ಮುಖಾಂತರವೇ ಅರ್ಜಿಗಳನ್ನು ಆನ್ ಲೈನ್ ಮೂಲಕ ಸಲ್ಲಿಸಬೇಕು. ಇತರೆ ಯಾವುದೇ ಮಾದರಿಯಲ್ಲಿ/ಮೂಲದ ಮುಖಾಂತರ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
2. ಅಭ್ಯರ್ಥಿಗಳು ಮೊದಲು KPSC ಅಂತರ್ಜಾಲ "http:://kpsc.kar.nic.in" ರಲ್ಲಿ "New User? Register Here link." ಅನ್ನು ಒತ್ತಿ ನೋಂದಣಿ ಮಾಡಿಕೊಳ್ಳಬೇಕು.
3. ಅಭ್ಯರ್ಥಿಗಳು ನೋಂದಣಿ ಮಾಡಿಕೊಳ್ಳಲು ಹಾಗೂ login ರುಜುವಾತುಗಳಿಗೆ **ಅನನ್ಯವಾದ** (unique) **ಇ- ಮೇಲ್ ವಿಳಾಸ ಮತ್ತು ಮೊಬೈಲ್ ಸಂಖ್ಯೆಯನ್ನು** ಹೊಂದಿರತಕ್ಕದ್ದು.
4. login ರುಜುವಾತುಗಳನ್ನು ಸೃಷ್ಟಿಸಿದ ನಂತರ ಅಭ್ಯರ್ಥಿಗಳು ಈ ರುಜುವಾತುಗಳೊಂದಿಗೆ login ಆಗಿ Profile Creation Link ಅನ್ನು ಒತ್ತಿ ಅವರ ಪೂರ್ಣ ಮಾಹಿತಿಯನ್ನು ಭರ್ತಿ ಮಾಡಬೇಕು. ಈ Profile ಅನ್ನು ಅಭ್ಯರ್ಥಿಗಳು ಒಂದು ಬಾರಿ ಭರ್ತಿ ಮಾಡಿದಲ್ಲಿ ಆಯೋಗದ ಮುಂದಿನ ಎಲ್ಲಾ ಅಧಿಸೂಚನೆಗಳಿಗೆ ಉಪಯೋಗವಾಗುತ್ತದೆ. ಅಭ್ಯರ್ಥಿಗಳು ಈ ಮಾಹಿತಿಯನ್ನು ಅಪ್ ಡೇಟ್ ಮಾಡಬಹುದು.
5. ಅಭ್ಯರ್ಥಿಗಳು Profile ರಲ್ಲಿ ಕೋರಲಾದ ಎಲ್ಲಾ ಮಾಹಿತಿಯನ್ನು ಜಾಗರೂಕತೆಯಿಂದ ಭರ್ತಿ ಮಾಡಿ SAVE ಬಟನ್ ಒತ್ತಿ SAVE ಮಾಡಿಕೊಳ್ಳಬೇಕು.
6. ಅಭ್ಯರ್ಥಿ ತನ್ನ ಇತ್ತೀಚಿನ ಭಾವಚಿತ್ರ ಮತ್ತು ಸಹಿ ಅಪ್ಲೋಡ್ ಮಾಡಬೇಕು.

- **ಭಾವಚಿತ್ರದ ಅಳತೆ(ಪಾಸ್ ಪೋರ್ಟ್ ಅಳತೆ) (ಗರಿಷ್ಠ ಅಳತೆ: 50 KB)**
- **ಸಹಿಯ ಅಳತೆ (ಗರಿಷ್ಠ ಅಳತೆ: 50 KB)**

7. ರುಜುವಾತುಗಳೊಂದಿಗೆ **login** ಆದ ನಂತರ ಅಭ್ಯರ್ಥಿಯು ಚಾಲ್ತಿಯಲ್ಲಿರುವ ಅಧಿಸೂಚನೆಗಳನ್ನು **Online Application Link.**ರಲ್ಲಿ ನೋಡಬಹುದು. **login** ಆದ ನಂತರ ಚಾಲ್ತಿಯಲ್ಲಿರುವ ಅಧಿಸೂಚನೆಗಳ ಪಕ್ಕದಲ್ಲಿ **Click Here to apply link** ಲಭ್ಯವಿದೆ.
8. ಅಭ್ಯರ್ಥಿಯು ಅಧಿಸೂಚನೆಗೆ ಅನುಗುಣವಾಗಿ ಅರ್ಜಿ ಸಲ್ಲಿಸಲು **Click Here to apply link** ಅನ್ನು ಒತ್ತಬೇಕು.
9. **Click Here to apply link** ಅನ್ನು ಒತ್ತಿದಲ್ಲಿ ಅಧಿಸೂಚನೆಯಲ್ಲಿನ ಹುದ್ದೆಗಳಿಗೆ ಅಭ್ಯರ್ಥಿಯ ಅರ್ಹತೆಯನ್ನು ಉಪಕರಣವು ಪರಿಶೀಲಿಸುತ್ತದೆ. ಅಭ್ಯರ್ಥಿ ಅರ್ಹತಾ ಷರತ್ತುಗಳನ್ನು ಪೂರೈಸದಿದ್ದಲ್ಲಿ ಸೂಕ್ತ ಸಂದೇಶವನ್ನು ಉಪಕರಣವು ಪ್ರಕಟಿಸುತ್ತದೆ.
10. ಅರ್ಹತಾ ಷರತ್ತುಗಳನ್ನು ಪೂರೈಸುವ ಅಭ್ಯರ್ಥಿಯ ಅರ್ಜಿಯನ್ನು ಮಾತ್ರ ಉಪಕರಣದಿಂದ ಸ್ವೀಕರಿಸಲ್ಪಡುತ್ತದೆ.
11. ಅರ್ಜಿಯನ್ನು ಅಂತಿಮವಾಗಿ ಸಲ್ಲಿಸಿದ ನಂತರ ಯಾವುದೇ ತಿದ್ದುಪಡಿಗಳನ್ನು ಮಾಡಲು ಅವಕಾಶ ಇಲ್ಲದ ಪ್ರಯುಕ್ತ ಅಭ್ಯರ್ಥಿಗಳು ಅಂತಿಮವಾಗಿ ಅರ್ಜಿಯನ್ನು ಸಲ್ಲಿಸುವ ಮುನ್ನ ಎಲ್ಲ ಅಗತ್ಯ ವಿವರಗಳನ್ನು ಭರ್ತಿ ಮಾಡಲಾಗಿದೆಯೇ ಎಂದು ಖಚಿತಪಡಿಸಿಕೊಳ್ಳಬೇಕು.
12. ನಿಗದಿತ ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
13. ಪರೀಕ್ಷಾ ಶುಲ್ಕವನ್ನು ಈ ಕೆಳಕಂಡ ಮಾದರಿಯಲ್ಲಿ ಪಾವತಿಸಬಹುದು:

- **ನೆಟ್ ಬ್ಯಾಂಕಿಂಗ್**
- **ಡೆಬಿಟ್ ಕಾರ್ಡ್**
- **ಕ್ರೆಡಿಟ್ ಕಾರ್ಡ್**
- **ಸಿ.ಎಸ್.ಸಿ (ಕಾಮನ್ ಸರ್ವೀಸ್ ಸೆಂಟರ್)**

14. ಶುಲ್ಕ ಪಾವತಿಸಲು ಅಭ್ಯರ್ಥಿಗಳು ಈ ಕೆಳಕಂಡ ಪದ್ಧತಿಯನ್ನು ಪಾಲಿಸಬೇಕು:-
    - **Login** ಆದ ನಂತರ ಎಡ ಭಾಗದಲ್ಲಿ **My Account link** ಲಭ್ಯವಿದ್ದು ಈ **My Account link** ಅನ್ನು ಒತ್ತಬೇಕು.
    - ಅಭ್ಯರ್ಥಿಯು ವಿವಿಧ ಅಧಿಸೂಚನೆಗಳಿಗೆ ಸಲ್ಲಿಸಿದ ಅರ್ಜಿಗಳ ಹಾಗೂ ಶುಲ್ಕ ಪಾವತಿಸಿದ ವಿವರವನ್ನು ನೋಡಬಹುದು. ಶುಲ್ಕ ವಿವರಗಳಲ್ಲಿ **Unpaid** ಎಂದು ನಮೂದಿಸಿರುವ ಅರ್ಜಿಗಳ ಎದುರು **Pay Now link** ಲಭ್ಯವಿರುತ್ತದೆ.
    - **Pay Now link** ಅನ್ನು ಒತ್ತಿದಲ್ಲಿ ಮೂರು ಆಯ್ಕೆಗಳು ಲಭ್ಯವಾಗುತ್ತದೆ: **(ಎ) ನೆಟ್ ಬ್ಯಾಂಕಿಂಗ್ , (ಬಿ) ಡೆಬಿಟ್ ಕಾರ್ಡ್, (ಸಿ) ಕ್ರೆಡಿಟ್ ಕಾರ್ಡ್**
    - ಆನ್ ಲೈನ್ ಪಾವತಿಯ ಮಾದರಿಯಲ್ಲಿ ಅಭ್ಯರ್ಥಿಯು ನೆಟ್ ಬ್ಯಾಂಕಿಂಗ್.
    - ಡೆಬಿಟ್ ಕಾರ್ಡ್ ಮತ್ತು ಕ್ರೆಡಿಟ್ ಕಾರ್ಡ್ ಮುಖಾಂತರ ಶುಲ್ಕ ಪಾವತಿಸಬಹುದು.

## ಅರ್ಜಿ ಸಲ್ಲಿಸುವ ಹಂತಗಳು/ ಅರ್ಜಿ ಸಲ್ಲಿಸುವ ಪ್ರಕ್ರಿಯೆ

### ಅರ್ಜಿ ಸಲ್ಲಿಸುವ ಪ್ರಕ್ರಿಯೆ.

ಅರ್ಜಿ ಸಲ್ಲಿಸುವ ಪ್ರಕ್ರಿಯೆಯಲ್ಲಿ ಮೂರು ಹಂತಗಳು ಇದೆ.

4. ಮೊದಲನೇ ಹಂತ: Profile Creation/Updation

5. ಎರಡನೇ ಹಂತ : Application Submission

6. ಮೂರನೇ ಹಂತ : Fees Payment through My Application section

ವಿವರವಾದ ಹಂತಗಳು:

{'*' Marks are mandatory/ ಗುರುತು ಇರುವ ಅಂಕಣಗಳು ಕಡ್ಡಾಯವಾಗಿ ಭರ್ತಿ ಮಾಡಬೇಕು)

If no response found on Save/Add button kindly refresh page (press control +F5)}

- ಹೊಸದಾಗಿ Application Link ರಲ್ಲಿ log in ಆಗಲು user name ಮತ್ತು password ಅನ್ನು ಸೃಷ್ಠಿಸಬೇಕು.
- Application Link ರಲ್ಲಿ log in ಆದ ನಂತರ ನಿಮ್ಮ ಪೂರ್ಣ profile ಅನ್ನು ಭರ್ತಿ ಮಾಡಿ. ಅಪ್ಲೋಡ್ ಮಾಡಬೇಕಾದ ಭಾವಚಿತ್ರ ಮತ್ತು ಸಹಿ ಸ್ಕ್ಯಾನ ಪ್ರತಿಗಳನ್ನು jpg ನಮೂನೆಯಲ್ಲಿ ಸಿದ್ದವಾಗಿರಬೇಕು ಹಾಗೂ 50 kb ಗಿಂತ ಹೆಚ್ಚಾಗಿರಬಾರದು.
- ಅಧಿಸೂಚನೆ ಎದುರು ಇರುವ "Click here to Apply" Link ಅನ್ನು ಒತ್ತಿ.
- ನಿಮ್ಮ profile ರಲ್ಲಿ ಲಭ್ಯವಿರುವ ಮಾಹಿತಿಯು ನಿಮ್ಮ ಅರ್ಜಿ ನಮೂನೆಯಲ್ಲಿ ಪ್ರಕಟವಾಗುತ್ತದೆ. ಅರ್ಜಿಯಲ್ಲಿ ಬಾಕಿ ಉಳಿದಿರುವ ಮಾಹಿತಿಯನ್ನು ಭರ್ತಿ ಮಾಡಿ ಸಲ್ಲಿಸಬೇಕು.
- ಅರ್ಜಿ ಸಲ್ಲಿಸಿದ ನಂತರ "My Application" link ರಲ್ಲಿ ನೀವು ಅರ್ಜಿ ಸಲ್ಲಿಸಿರುವ ಅಧಿಸೂಚನೆಯನ್ನು ಆಯ್ಕೆ ಮಾಡಿದಲ್ಲಿ ಕೆಳಗೆ ನಿಮ್ಮ ಅರ್ಜಿಯು ಪ್ರಕಟವಾಗುತ್ತದೆ.
- ಅರ್ಜಿಯ ಪಕ್ಕದಲ್ಲಿ "Pay Now" link ಅನ್ನು ಒತ್ತಿದಲ್ಲಿ "Online payment" ಆಯ್ಕೆಗಳು ಮೂಡುತ್ತವೆ.

ಒಂದು ಬಾರಿ ನೋಂದಣಿ/ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಯಾವುದಾದರೂ ತಾಂತ್ರಿಕ ತೊಂದರೆಗಳು ಉಂಟಾದಲ್ಲಿ ಸಹಾಯವಾಣಿ ಸಂಖ್ಯೆ:8660324265 ಯನ್ನು ಸಂಪರ್ಕಿಸಲು ಸೂಚಿಸಿದೆ.

……….